**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1351/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಗುರುಸ್ವಾಮಿ** | ಪ್ರಾಸಾಃ 8 |
| ತಂದೆಯ/ಗಂಡನ ಹೆಸರು | | ಸೀನನಾಯಕ | ಚಾಸಾಃ 8 |
| ವಯಸ್ಸು | | 32 ವರ್ಷ | |
| ಕೆಲಸ | | ಆಟೋ ಚಾಲಕ | ಸಾ ಪ್ರ ಬೋ |
| ವಾಸ | | ಹೆಡತಲೆ ಗ್ರಾಮ | ದಿಃ 17/01/2024 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಆರೋಪಿತರು ಗೊತ್ತು. ಚಾಸಾ-1 ರಿಂದ 7 ಗೊತ್ತು. ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದು ಸ್ಥಳ ಪಂಚನಾಮೆ ಯಾಗಿದ್ದು, ಸ್ಥಳ ಪಂಚನಾಮೆ ಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆ ಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಸುಮಾರು 9-10 ವರ್ಷಗಳ ಹಿಂದೆ ಪೊಲೀಸರು ಗ್ರಾಮಕ್ಕೆ ಬೀಟ್ ಗೆ ಬಂದಾಗ ನಿಪಿ-2 ಕ್ಕೆ ನನ್ನ ಸಹಿ ಪಡೆದಿರುತ್ತಾರೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ ಮತ್ತು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ನೈಟಿ, ಟವಲ್ ಮತ್ತು ಮಚ್ಚನ್ನು ನೋಡಿ ಗುರುತಿಸಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 28.03.2014 ರಂದು ಚಾಸಾ-1 ರವರು ಕೃತ್ಯ ನಡೆದ ಸ್ಥಳವನ್ನು ಪೊಲೀಸರಿಗೆ ತೋರಿಸಿದ ಮೇರೆಗೆ ಅವರುಗಳು ನನ್ನ ಹಾಗು ಚಾಸಾ-7 ರವರ ಸಮಕ್ಷಮ ಆರೋಪಿತರಿಗೆ ಮತ್ತು ಚಾಸಾ-1 ರಿಂದ 4 ರವರ ನಡುವೆ ನಡೆದಿದ್ದ ಗಲಾಟೆ ವಿಚಾರವಾಗಿ ಹೆಡತಲೆ ಗ್ರಾಮದ ಚಾಸಾ-1 ರವರ ಮನೆಯ ಮುಂಭಾಗದ

ರಸ್ತೆಯಲ್ಲಿ ಮಧ್ಯಾಹ್ನ 3.00 ರಿಂದ 4.00 ರವರೆಗೆ ನಿಪಿ-2 ರಂತೆ ಪಂಚನಾಮೆ ಜರುಗಿಸಿ ಆರೋಪಿತರು ಕೃತ್ಯಕ್ಕೆ ಉಪಯೋಗಿಸಿದ್ದ ಮಚ್ಚು, ಕೃತ್ಯ ನಡೆದಾಗ ಚಾಸಾ-4 ರವರಿಗೆ ತಲೆಗೆ ರಕ್ತ ಗಾಯವಾಗಿ ಟವೆಲ್ ಗೆ ರಕ್ತದ ಕಲೆಗಳಾಗಿದ್ದು ಮತ್ತು ಕೃತ್ಯದ ಸಮಯದಲ್ಲಿ ಚಾಸಾ-3 ರವರು ಧರಿಸಿದ್ದ ಒಂದು ನೈಟಿಯನ್ನು ಚಾಸಾ-1 ರವರು ಹಾಜರುಪಡಿಸಿದ ಮೇರೆಗೆ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು:** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**